## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಯೋಜನಾ ನಿರ್ದೇಶಕರು SPMU-DRIP ಘಟಕ ಕಛೇರಿಯಲ್ಲಿರುವ 02 ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗಳನ್ನು ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ಉನ್ನತೀಕರಿಸುವ ಬಗ್ಗೆ.

ಓದಲಾಗಿದೆ :

1) ಸರ್ಕಾರದ ಆದೇಶ ಸಂಖ್ಯೆ: WRD 10 DSP 2014 ದಿನಾಂಕ:27/05/2015.
2) ಯೋಜನಾ ನಿರ್ದೇಶಕರು, ಎಸ್‌ಪಿಎಂಯು-ಡ್ರಿಪ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ ಬೆಂಗಳೂರು ಇವರ ಪತ್ರ ಸಂಖ್ಯೆ: ಮು.ಇಂ/ಜಸಂಅಂಸಂ/ಎಸ್‌ಪಿಎಂಯು –ಡ್ರಿಪ್/2019–20/279 ದಿನಾಂಕ: 15.07.2019.

********

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ದಿನಾಂಕ: 27.05.2015ರ ಸರ್ಕಾರದ ಆದೇಶದಲ್ಲಿ World Bank ಪ್ರಯೋಜಿತ Dam Rehabilitation and Improvement Project (DRIP) ಯೋಜನೆಯನ್ನು ನಿರ್ವಹಣೆ ಮಾಡಲು ರಾಜ್ಯ ಮಟ್ಟದ State Project Management Unit (SPMU) ಅನ್ನು ರಚಿಸಿದ್ದು ಈ ಘಟಕಕ್ಕೆ 06 ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗಳನ್ನೊಳಗೊಂಡಂತೆ ಒಟ್ಟು 48 ಹುದ್ದೆಗಳನ್ನು ತಾತ್ಕಾಲಿಕವಾಗಿ ಸೃಜಿಸಲಾಗಿರುತ್ತದೆ.

2. ಮೇಲೆ (2)ರಲ್ಲಿ ಓದಲಾದ ದಿನಾಂಕ: 15.07.2019ರ ಪತ್ರದಲ್ಲಿ ಯೋಜನಾ ನಿರ್ದೇಶಕರು, SPMU-DRIP, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಉಸ್ತುವಾರಿ ಮತ್ತು ಮೌಲ್ಯಮಾಪನ ಘಟಕ, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಕಛೇರಿಯಿಂದ ನಿಯೋಜನೆ ಮೇರೆಗೆ SPMU-DRIP(Dam Rehabilitation and Improvement Project), ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಕಛೇರಿಯಲ್ಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಆಗಿ ಕಾರ್ಯನಿರ್ವಹಿಸುತ್ತಿರುವ ಶ್ರೀ ಕೃಷ್ಣಮೂರ್ತಿ ಕೆ. ಮತ್ತು ಶ್ರೀ ಶಿವಕುಮಾರ್ ರವರು

24.12.19

...2

DRIP ಯೋಜನೆ ಆರಂಭದಿಂದಲೂ (5 ವರ್ಷಗಳಿಂದಲೂ) DRIP ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸದರಿಯವರ ಕಾರ್ಯವೈಖರಿ ಉತ್ತಮವಾಗಿರುತ್ತದೆ. ಸರ್ಕಾರದ ಅಧಿಸೂಚನೆ ಸಂಖ್ಯೆ: ಲೋಇ 03 ಸೇಎಸು 2019, ಬೆಂಗಳೂರು ದಿನಾಂಕ:08.07.2019ರನ್ವಯ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯಿಂದ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ಪದೋನ್ನತಿ ಹೊಂದಿದ್ದು, ಸದರಿ ಅಧಿಕಾರಿಗಳು ವಿಶ್ವ ಬ್ಯಾಂಕ್ ನೆರವಿನಿಂದ ಕೈಗೊಳ್ಳಲಾಗಿರುವ DRIP ಯೋಜನೆಯಲ್ಲಿ ಸುಮಾರು 5 ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿದ್ದು, ಇವರು ವಿಶ್ವ ಬ್ಯಾಂಕ್‌ನ Procurement guidelines, ಹಾಗೂ Tender Condition ಗಳಲ್ಲಿ ಪರಿಣಿತಿ ಹೊಂದಿರುತ್ತಾರೆ ಹಾಗೂ ಕೇಂದ್ರ ಜಲ ಆಯೋಗದೊಂದಿಗೆ ಉತ್ತಮ ಸಂಪರ್ಕ ಹೊಂದಿರುತ್ತಾರೆ. DRIP-1 ಯೋಜನೆಯು ಜೂನ್-2020ರ ಅಂತ್ಯಕ್ಕೆ ಪೂರ್ಣಗೊಳ್ಳಲಿದ್ದು, ನಂತರ DRIP-2 ಯೋಜನೆಯು ಪ್ರಾರಂಭಗೊಳ್ಳಲಿದೆ. ಆದ್ದರಿಂದ ಇವರ ಸೇವೆಯು SPMU-DRIP ಗೆ ಅವಶ್ಯಕವಾಗಿರುತ್ತದೆ. ಪ್ರಸ್ತುತ DRIP ಕಛೇರಿಯಲ್ಲಿ ಹಾಲಿ 6 ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯಿದ್ದು, ಈ ಪೈಕಿ 4 ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯನ್ನು ಮುಂದುವರೆಸಿ ಉಳಿದ 2 ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯನ್ನು ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ಉನ್ನತಿಕರಿಸಿ, ಶ್ರೀ ಕೃಷ್ಣಮೂರ್ತಿ ಕೆ. ಮತ್ತು ಶ್ರೀ ಶಿವಕುಮಾರ್ ಹೆಚ್.ಎಸ್. ರವರನ್ನು DRIP ಕಛೇರಿಯ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ಸ್ಥಳನಿಯುಕ್ತಿಗೊಳಿಸುವಂತೆ ಕೋರಿರುತ್ತಾರೆ.

3. ಪ್ರಸ್ತಾವನೆಯನ್ನು ಪರಿಶೀಲಿಸಿ ವಿಶ್ವ ಬ್ಯಾಂಕ್ ನೆರೆನಿಂದ ಕೈಗೊಳ್ಳಲಾಗಿರುವ ಡ್ರಿಪ್ ಯೋಜನೆಯನ್ನು ನಿಗಧಿತ ಸಮಯದಲ್ಲಿ ಪೂರ್ಣಗೊಳಿಸಲು ಅನುವಾಗುವಂತೆ ಆಡಳಿತ ಹಿತದೃಷ್ಟಿಯಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಜಸಂಇ 87 ಸೇಎಸು 2019,</u>**

**<u>ಬೆಂಗಳೂರು, ದಿನಾಂಕ: 24.12.2019</u>**

4. ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ವಿಶ್ವ ಬ್ಯಾಂಕ್ ನೆರವಿನ ಯೋಜನೆಯಡಿ State Project Management Unit (SPMU) ನಲ್ಲಿ ಸರ್ಕಾರದ ಆದೇಶ ಸಂಖ್ಯೆ: ಜಸಂಇ WRD 10 DSP 2014, ದಿನಾಂಕ: 27.05.2015ರಲ್ಲಿ ತಾತ್ಕಾಲಿಕವಾಗಿ ಸೃಜಿಸಲಾದ 06 ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗಳಲ್ಲಿ 02 ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗಳನ್ನು ತಾತ್ಕಾಲಿಕ ನಿಲಂಬನೆಯಲ್ಲಿರಿಸಿ, ರೂ. 67550-104600 ವೇತನ ಶ್ರೇಣಿಯ 02 ಕಾರ್ಯಪಾಲಕ

24.12.19

3

ಇಂಜಿನಿಯರ್ ಹುದ್ದೆಗಳನ್ನು ಒಂದು ವರ್ಷದವರೆಗೆ ಅಥವಾ ಮುಂದಿನ ಆದೇಶದ ವರೆಗೆ ಅಥವಾ ಸದರಿ DRIP-1 ಯೋಜನೆಯು ಮುಗಿಯುವವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ತಾತ್ಕಾಲಿಕವಾಗಿ ಸೃಜಿಸಿ ಆದೇಶಿಸಿದೆ.

5. ಅದರಂತೆ, ತಾತ್ಕಾಲಿಕವಾಗಿ ಸೃಜಿಸಲಾದ 02 ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ಎದುರಾಗಿ ಶ್ರೀ ಕೃಷ್ಣಮೂರ್ತಿ ಕೆ. ಹಾಗೂ ಶ್ರೀ ಶಿವಕುಮಾರ್ ಹೆಚ್.ಎಸ್., ಕಾರ್ಯಪಾಲಕ ಇಂಜಿನಿಯರ್ ಇವರುಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

6. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 650 ಆಕೋ-1/2019, ದಿನಾಂಕ: 18.12.2019ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
24.12.19.
( ಕೆ.ಎಲ್.ಪ್ರಸಾದ್ )
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ (ಸೇವೆಗಳು-ಎ).
24/12/19

ಪ್ರತಿಯನ್ನು ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಣೆಗಾಗಿ ಹಾಗೂ ಅದರ 150 ಪ್ರತಿಗಳನ್ನು ಈ ಇಲಾಖೆಗೆ ಪೂರೈಸುವ ಸಲುವಾಗಿ.

ಪ್ರತಿ:

1) The Secretary, Ministry of Water Resources, R.K Puram. New Delhi.
2) The Chairman, Central Water Commisiion, Seva Bhavana, R.K.Puram. New Delhi.
3) The Account General. (A&E), Karnataka, Bangalore.
4) The Chif Engineer, DSO, Dam Safety Rehabilitation Directorate. CWC.GOI. 725(A). Seva Bhavana (N.K) R.K.Puram. New Delhi-110066.

5) ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಾಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

6) ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.

7) ಸರ್ಕಾರದ ಕಾರ್ಯದರ್ಶಿ, ಸಣ್ಣ ನೀರಾವರಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.

8) ಮುಖ್ಯ ಇಂಜಿನಿಯರ್ & ನೋಡಲ್ ಅಧಿಕಾರಿ–DRIP ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಹಾಗೂ ಜಲಸಂಪನ್ಮೂಲ ಇಲಾಖೆಯ ಎಲ್ಲಾ ಮುಖ್ಯ ಇಂಜಿನಿಯರ್‌ಗಳಿಗೆ ಇವರ ವತಿಯಿಂದ.

9) ನಿರ್ದೇಶಕರು, ಕೆ.ಇ.ಆರ್.ಎಸ್. ಕೃಷ್ಣರಾಜಸಾಗರ. ಮಂಡ್ಯ.

10) ಅಧೀಕ್ಷಕ ಇಂಜಿನಿಯರ್(ಹೈಡ್ರಾಲಜಿ), ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.

11) ವಿಶೇಷಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಲೋಕೋಪಯೋಗಿ ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.

12) ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

13) ಜಂಟಿ ನಿರ್ದೇಶಕರು & ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ, ಯೋಜನಾ ಮೇಲ್ವಿಚಾರಣಾ ಘಟಕ, ಆರ್ಥಿಕ ಇಲಾಖೆ, ಬೆಂಗಳೂರು.

14) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.

15) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ. ವಿಕಾಸ ಸೌಧ, ಬೆಂಗಳೂರು.

16) ಶಾಖಾ ರಕ್ಷಾ ಕಡತ.ಹೆಚ್ಚುವರಿ ಪ್ರತಿಗಳು.